అక్షర విజేత
తెలంగాణ, ఆంధ్రప్రదేశ్, తమిళనాడు, కర్ణాటక
ಅಕ್ಷರ ವಿಜೇತ
ನಿಜ ನಿರ್ಭಯ ನಿಷ್ಪಕ್ಷ ಎಡಿಟರ್: ಅನಿಲ್‌ಕುಮಾರ್
CIRCULATED FROM TS, KA, AP & TN
வென்றவா
தேசிய நாளிதழ்
தலைவர் மற்றும் தலைமை ஆசிரியர்: அனில் குமார்
தெலுங்கானா,ஆந்திரா,கர்நாடகா,தமிழ்நாடு
Saturday 06 September 2025 RNI: TELTEL/2021/81079 website: www.Vijethadaily.com

# ಡಿ.ಕೆ.ಶಿವಕುಮಾರ್ ಬಳಿ ಒಟ್ಟು ಎಷ್ಟು ಕೋಟಿ ಆಸ್ತಿ ಇದೆ? ಅಸಲಿ ವಿವರ ಬಹಿರಂಗ

**ಅಕ್ಷರ್ ವಿಜೇತ ,ಬೆಂಗಳೂರು :**

ಕರ್ನಾಟಕದ ಭವಿಷ್ಯದ ಮುಖ್ಯಮಂತ್ರಿಯಾಗುವ ಕನಸು ಹೊತ್ತಿದ್ದಾರೆ ಡಿ.ಕೆ.ಶಿವಕುಮಾರ್. ಕನಕಪುರದ ಬಂಡೆ ಎಂದೇ ರಾಜ್ಯ ರಾಜಕಾರಣದಲ್ಲಿ ಹವಾ ಸೃಷ್ಟಿಸಿರುವ ಅವರು ಸದ್ಯ ಉಪಮುಖ್ಯಮಂತ್ರಿ ಸ್ಥಾನದಲ್ಲಿದ್ದಾರೆ. ಈಗೆಲ್ಲ ರಾಜಕಾರಣಿಗಳು ಅಂದರೆ ತುಂಬಾ ಶ್ರೀಮಂತರು, ಭಾರೀ ಆಸ್ತಿ ಹೊಂದಿರುತ್ತಾರೆ ಎನ್ನುವ ಮಾತಿದೆ. ಡಿಕೆ ಶಿವಕುಮಾರ್ ಅವರು ರಾಜಕಾರಣದ ಜೊತೆಗೆ ಬಿಸಿನೆಸ್‌ನಲ್ಲೂ ಇದ್ದಾರೆ. ಹೀಗಾಗಿ ಶ್ರೀಮಂತ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದಾರೆ. ಸದ್ಯ ಡಿ.ಕೆ.ಶಿವಕುಮಾರ್ ಅವರ ಒಟ್ಟು ಆಸ್ತಿ ಎಷ್ಟಿದೆ ಎಂಬ ಮಾಹಿತಿ ಬಹಿರಂಗವಾಗಿದೆ.ದೇಶದ ಅತ್ಯಂತ ಶ್ರೀಮಂತ ರಾಜಕೀಯ ನಾಯಕರ ಪಟ್ಟಿಯಲ್ಲೂ ಡಿ.ಕೆ.ಶಿವಕುಮಾರ್ ಅವರು ಮುಂಚೂಣಿ ಸ್ಥಾನ ಪಡೆದಿದ್ದಾರೆ. ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ವರದಿಯಲ್ಲಿ ಈ ವಿಚಾರ ಹೊರಬಿದ್ದಿದ್ದು, ಪ್ರಸ್ತುತ ಡಿಕೆ ಶಿವಕುಮಾರ್ ಅವರ ಒಟ್ಟು ಆಸ್ತಿ ಎಷ್ಟಿದೆ ಎಂಬುದು ಬಹಿರಂಗವಾಗಿದೆ. ಅದರಂತೆ ಡಿ.ಕೆ.ಶಿವಕುಮಾರ್ ದೇಶದ ಎರಡನೇ ಶ್ರೀಮಂತ ಸಚಿವರು ಎಂದು ಈ ವರದಿ ತಿಳಿಸಿದೆ.



ರಾಜ್ಯದ 8 ಮಂದಿ ಬಳಿ 100 ಕೋಟಿ ಆಸ್ತಿ

ಚುನಾವಣೆ ಸಂದರ್ಭದಲ್ಲಿ ಎಲ್ಲ ರಾಜ್ಯಗಳ ವಿಧಾನಸಭೆ, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಚಿವರು ಸಲ್ಲಿಸಿದ್ದ ಪ್ರಮಾಣಪತ್ರಗಳನ್ನು ವಿಶ್ಲೇಷಿಸಿ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ವರದಿ ಬಿಡುಗಡೆ ಮಾಡಿದೆ. ಒಟ್ಟು 652 ಸಚಿವರ ಪೈಕಿ 643 ಸಚಿವರು ಸಲ್ಲಿಸಿದ್ದ ಪ್ರಮಾಣಪತ್ರಗಳಿಂದ ಈ ಮಾಹಿತಿ ತೆಗೆಯಲಾಗಿದೆ. ಕರ್ನಾಟಕದ ಎಂಟು ಸಚಿವರು ಬರೋಬ್ಬರಿ 100 ಕೋಟಿ ರೂಪಾಯಿಗಿಂತ ಹೆಚ್ಚು ಆಸ್ತಿ ಹೊಂದಿರುವ ಇರುವ ಇದ್ದಾರೆ. ಇದಾದ ನಂತರ ಆಂಧ್ರಪ್ರದೇಶದಲ್ಲಿ ಶ್ರೀಮಂತ ರಾಜಕಾರಣಿಗಳಿದ್ದಾರೆ.ಎಡಿಆರ್ ವರದಿ ಪ್ರಕಾರ ಕಾಂಗ್ರೆಸ್ ಪಕ್ಷದ ಡಿ.ಕೆ.ಶಿವಕುಮಾರ್ ಅವರ ಬಳಿ 1,413 ಕೋಟಿ ಆಸ್ತಿ ಇದೆ. ಈ ಮೂಲಕ ಎರಡನೇ ಶ್ರೀಮಂತ ಸಚಿವ ಎನಿಸಿಕೊಂಡಿದ್ದಾರೆ.

ಟಿಡಿಪಿ ಪಕ್ಷದ ಕೇಂದ್ರ ಸಚಿವ ಚಂದ್ರಶೇಖರ ಪೆಮ್ಮಸಾನಿ ಅವರು ಬರೋಬ್ಬರಿ 5,705 ಕೋಟಿ ಆಸ್ತಿ ಹೊಂದಿದ್ದು ದೇಶದ ಕುಬೇರ ಸಚಿವ ಎಂದು ಮೊದಲ ಸ್ಥಾನ ಅಲಂಕರಿಸಿದ್ದಾರೆ.ಅತಿ ಹೆಚ್ಚು ಶತಕೋಟ್ಯಾಧಿಪತಿ ಸಚಿವರನ್ನು ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕವು ಮೊದಲ ಸ್ಥಾನದಲ್ಲಿದ್ದರೆ, ಟಿಡಿಪಿ ಪಕ್ಷದಿಂದಾಗಿ ಆಂಧ್ರಪ್ರದೇಶ ಎರಡನೇ ಸ್ಥಾನದಲ್ಲಿದೆ. ಆಂಧ್ರಪ್ರದೇಶದ ತೆಲುಗು ದೇಶಂ ಪಕ್ಷ (ಟಿಡಿಪಿ) ಎರಡನೇ ಅತಿ ಹೆಚ್ಚು ಶತಕೋಟ್ಯಾಧಿಪತಿ ಸಚಿವರನ್ನು ಹೊಂದಿರುವ ರಾಜಕೀಯ ಪಕ್ಷ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆಂಧ್ರಪ್ರದೇಶದ ಆರು ಮಂದಿ ಸಚಿವರು ಶತಕೋಟ್ಯಾಧಿಪತಿಗಳಾಗಿದ್ದು, ಅವರಲ್ಲಿ ಐದು ಮಂದಿ ಟಿಡಿಪಿಯವರು ಮತ್ತು ಒಬ್ಬರು ಜನಸೇನಾ ಪಕ್ಷಕ್ಕೆ ಸೇರಿದ್ದಾರೆ.ಒಟ್ಟು 643 ಸಚಿವರ ಪೈಕಿ 302 ಮಂದಿ ರಾಜಕಾರಣಿಗಳ ವಿರುದ್ಧ ಕ್ರಿಮಿನಲ್ ಪ್ರಕರಣಗಳೂ ಇದ್ದು, 174 ವಿರುದ್ಧ ಗಂಭೀರ ಅಪರಾಧ ಪ್ರಕರಣಗಳಿವೆ. ಕೇಂದ್ರ ಸಚಿವ ಸಂಪುಟದ 29 ಮಂದಿಯ ವಿರುದ್ಧ ಪ್ರಕರಣಗಳಿವೆ. ಈ ಪ್ರಕರಣಗಳಲ್ಲಿ ಕೊಲೆ, ಕೊಲೆ ಯತ್ನ, ಅಪಹರಣ, ಮಹಿಳೆಯರ ವಿರುದ್ಧ ಅಪರಾಧಗಳು ಸೇರಿದಂತೆ ಹಲವು ಕೇಸ್‌ಗಳಿವೆ.

## ಗ್ರೇಟರ್ ಬೆಂಗಳೂರು: ಆಕ್ಟೀವ್ ಆದ ಹೊಸ ಆಯುಕ್ತರು!



ಬೆಂಗಳೂರಿನಲ್ಲಿ ಹೊಸ ಇತಿಹಾಸ ಸೃಷ್ಟಿಯಾಗಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯುಗಾಂತ್ಯವಾದ ಬೆನ್ನಲ್ಲೇ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕೆಲಸಗಳು ಚುರುಕು ಪಡೆದುಕೊಂಡಿದ್ದು, ಮೊದಲ ಹಂತದಲ್ಲಿ ಐದು ಮಹಾನಗರ ಪಾಲಿಕೆಗಳು ರಚನೆಯಾಗಿದ್ದು. ಬೆಂಗಳೂರಿನ ವಿವಿಧ ಪಾಲಿಕೆಗಳ ಆಯುಕ್ತರು ಕೆಲಸ ಶುರು ಮಾಡಿಕೊಂಡಿದ್ದಾರೆ.ಬೆಂಗಳೂರು ಕೇಂದ್ರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಂಚಾರ, ಸುರಕ್ಷತೆ ಮತ್ತು ಮೂಲಭೂತ ಸೌಕರ್ಯಗಳನ್ನು ಉತ್ತಮಗೊಳಿಸುವ ಉದ್ದೇಶದಿಂದ ಗುಂಡಿ ಮುಕ್ತ ರಸ್ತೆ, ಬ್ಲಾಕ್ ಸ್ಪಾಟ್ ರಹಿತ ಮತ್ತು ಒತ್ತುವರಿ ಮುಕ್ತ ಪಾದಚಾರಿ ಮಾರ್ಗ ನಿರ್ಮಾಣಕ್ಕಾಗಿ ತ್ವರಿತ ಕ್ರಮ ಕೈಗೊಳ್ಳುವಂತೆ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತರಾದ ರಾಜೇಂದ್ರ ಚೋಳನ್ ಪಿ ಅವರು ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಹೊಸ ಪಾಲಿಕೆಗಳು ರಚನೆಯಾದ ಮೇಲೆ ಹೊಸ ಆಯುಕ್ತರು ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ.

## ಆರೋಗ್ಯ ಸಂಜೀವಿನಿ ಯೋಜನೆ ಕುರಿತು ರಾಜ್ಯ ಸರ್ಕಾರ ಮಹತ್ವದ ಆದೇಶ

### ಮಾಹಿತಿ, ವಿವರ ತಿಳಿಯಿರಿ



ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೂತನ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು **(THE KARNATAKA AROGYA SANJEEVINI SCHEME KASS)** ಅನುಷ್ಠಾನಗೊಳಿಸಲು ರಚಿಸಲಾದ **KASS** ಉನ್ನತ **(KASS HIGH LEVEL POLICY COMMITTEE)**ಯ ಸಂಯೋಜನೆಯನ್ನು ಮಾರ್ಪಡಿಸುವ ಬಗ್ಗೆ ಇಂದು ಕರ್ನಾಟಕ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ.



## ಮೆಟ್ರೋ ವಿಸ್ತರಣೆ, ಕನಕಪುರದಲ್ಲಿ ಹೊಸ ವೈದ್ಯಕೀಯ ಕಾಲೇಜು; ಜಮೀನು ಖರೀದಿಸಲು ರೂ.65.00 ಕೋಟಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಮೆಟ್ರೋ ವಿಸ್ತರಣೆ ವಿಮಾ ಪ್ರತಿ ಯೋಜನೆಗಳ ಲಾಭಾಂಶ ಘೋಷಣೆಯಿಂದ ಹಿಡಿದು ಆರೋಗ್ಯ, ಶಿಕ್ಷಣ, ಮೂಲಸೌಕರ್ಯ ಮತ್ತು ಚುನಾವಣಾ ಸುಧಾರಣೆಗಳವರೆಗೆ ಹಲವು ವಿಷಯಗಳಿಗೆ ನಿರ್ಣಯ ಕೈಗೊಳ್ಳಲಾಯಿತು.ಈ ಕುರಿತು ಸಚಿವ ಸಂಪುಟ ಸಭೆಯ ಬಳಿಕ ಕಾನೂನು ಸಚಿವ ಹೆಚ್ ಕೆ ಪಾಟೀಲ್ ಅವರು ಮಾತನಾಡಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಮೊದಲನೇ ಹಂತದಲ್ಲಿ ಕರ್ನಾಟಕ ಗೃಹ ಮಂಡಳಿಯಿAದ ರೂ.**65.00** ಕೋಟಿಗಳ ವೆಚ್ಚದಲ್ಲಿ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಣಯಿಸಿದೆ.

## ಪಡಿತರ ಚೀಟಿದಾರರಿಗೆ ಇನ್ಮುಂದೆ ಈ ಸೌಲಭ್ಯ ಇಲ್ಲ

### ಇಲ್ಲಿದೆ ಸಂಪೂರ್ಣ ಮಾಹಿತಿ

ಪ್ರಮುಖ ದಾಖಲೆಗಳಲ್ಲಿ ಪಡಿತರ ಚೀಟಿ ಕೂಡ ನೀಡಲಾಗುತ್ತದೆ. ಇದು ಬರೀ ಪರಿತರ ಪಡೆಯಲು ಅಷ್ಟೇ ಅಲ್ಲದೆ, ಯಾವುದೇ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು, ಸರ್ಜಿ ಸಲ್ಲಿಕೆಗೂ ಅತ್ಯಗತ್ತವಾಗಿದೆ. ಇದರಲ್ಲೂ ಹಲವು ವಿಧದ ರೇಷನ್ ಕಾರ್ಡ್ ಇದ್ದು, ಒಂದೊಂದಕ್ಕೆ ಒಂದು ರೀತಿಯಲ್ಲಿ ಪಡಿತರ ನೀಡಲಾಗುತ್ತದೆ. ಆದರೆ, ಗೋಣಿ ಚೀಲ ನಿಯಮ ಮಾತ್ರ ಎಲ್ಲಾರಿಗೂ ಒಂದೇ. ಹಾಗಾದ್ರೆ, ಇದು ಏನು? ಮುನ್ನೆಲೆಗೆ ಬಂದಿದ್ದು ಯಾಕೆ ಎನ್ನುವುದನ್ನು ಗ್ರಾಹಕರು ಗಮನಿಸಲೇಬೇಕಾದ ವಿಚಾರವೊಂದು ಇಲ್ಲಿದೆ.ರಾಜ್ಯದಲ್ಲಿ ನಕಲಿ ದಾಖಲೆ ಸೃಷ್ಟಿಸಿ ಪಡೆದಂತಹ ಬಿಪಿಎಲ್ ಕಾರ್ಡ್‌ಗಳ ರದ್ದತಿಗೆ ಸರ್ಕಾರ ಮುಂದಾಗಿದ್ದು, ಅಂತಹವನ್ನು ಎಪಿಎಲ್‌ಗೆ ವರ್ಗಾಹಿಸುವ ಕೆಲಸ ನಡೆಯುತ್ತಿದೆ. ಮತ್ತೊಂದೆಡೆ ಅನರ್ಹರು ಬಳಿಯಿರುವ ಎಲ್ಲಾ ರೀತಿಯ ಪಡಿತರ ಚೀಟಿಗಳನ್ನು ಕೂಡ ರದ್ದುಪಡಿಸುವ ಮಹತ್ವದ ಕಾರ್ಯವನ್ನು ಸಹ ಮುಂದುವರೆಸಿದೆ. ಈ ನಡುವೆಯೇ ಗೋಣಿ ಚೀಲ ನಿಯಮ ಮುನ್ನಲ್ಲೆಗೆ ಬಂದಿದೆ. ಇದೇನು ಎನ್ನುವ ಪ್ರಶ್ನೆಗೆ ಉತ್ತರ ಇಲ್ಲಿದೆ ಕಣ್ಣಾಡಿಸಿ.ಹೌದು.. ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಕಾರ್ಡ್ ಹೊಂದಿರುವಂತಹವರಿಗೆ ಅಕ್ಕಿ ತೆಗೆದುಕೊಂಡು ಹೋಗಲು ಗೋಣಿ ಚೀಲವನ್ನು ಉಚಿತವಾಗಿ ನೀಡುವುದಿಲ್ಲ. ಪಡಿತರಚೀಟಿದಾರರು ನ್ಯಾಯಬೆಲೆ ಅಂಗಡಿಗೆ ಅಕ್ಕಿ ಪಡೆಯಲು ಗೋಣಿಚೀಲವನ್ನು ತರಲೇಕಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಸರ್ಕಾರಿ ಪಡಿತರ ವಿತರಕರ ಸಂಘದ ಅಧ್ಯಕ್ಷ ಕೇಶವ ಮೂರ್ತಿ ಸ್ಪಷ್ಟನೆ ನೀಡಿದ್ದಾರೆ.




ಪಡಿತರ ಚೀಟಿದಾರರಿಗೆ ಈ ಸೌಲಭ್ಯ ಇಲ್ಲ

ಈ ಬಗ್ಗೆ ಮಂಗಳೂರಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಮಂಗಳೂರಿನ ಕಟೀಲು ನ್ಯಾಯಬೆಲೆ ಅಂಗಡಿಯೊಂದರಲ್ಲಿ ಗ್ರಾಹಕರೊಬ್ಬರು ಮಾಡಿದ ವಿಡಿಯೋದಲ್ಲಿ ಗೋಣಿಚೀಲ ಉಚಿತವಾಗಿ ನೀಡುವಂತೆ ನ್ಯಾಯಬೆಲೆ ಅಂಗಡಿದಾರರನ್ನು ಬೆದರಿಸುವ ವಿಡಿಯೋ ವೈರಲ್ ಆಗಿತ್ತು. ಈ ವಿಡಿಯೋ ಬಗ್ಗೆ ಸಾರ್ವಜನಿಕರಲ್ಲಿ ತಪ್ಪು ಕಲ್ಪನೆ ಮೂಡಿದೆ. ಎಲ್ಲಾ ನ್ಯಾಯಬೆಲೆ ಅಂಗಡಿದಾರರನ್ನು ಸಾರ್ವಜನಿಕರು ಕೆಟ್ಟ ದೃಷ್ಟಿಯಲ್ಲಿ ನೋಡುವಂತೆ ಆಗಿದೆ ಎಂದು ಹೇಳಿದರು.ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಪ್ರತಿ ಕ್ವಿಂಟಾಲ್‌ನಲ್ಲಿ ಲಾಭಾಂಶವನ್ನು 56 ರೂಪಾಯಿ ಎಂದು ಸರ್ಕಾರ ನಿಗದಿಪಡಿಸಿದೆ. ಇದರಲ್ಲಿ 36 ರೂಪಾಯಿ ನಗದು ರೂಪದಲ್ಲಿ ಬರಲಿದೆ. ಉಳಿದ 20 ರೂಪಾಯಿಗಳನ್ನು ನಗದು ನೀಡದೆ, ಎರಡು ಗೋಣಿಚೀಲಗಳನ್ನು ನೀಡಲಾಗುತ್ತದೆ. ಇಂತಹ ಘಟನೆಗಳು ರಾಜ್ಯದ ಹಲವೆಡೆ ನಡೆಯುತ್ತಿವೆ. ಪಡಿತರ ವಿತರಕರು ಇಂತಹ ಘಟನೆಗಳಿಂದಾಗಿ ಮತ್ತಷ್ಟು ಸಮಸ್ಯೆ ಎದುರಿಸುವಂತೆ ಆಗಿದೆ ಎಂದು ಹೇಳಿದರು.

## ಆಕ್ಟೀವ್ ಆದ ಹೊಸ ಆಯುಕ್ತರು!

ಅಕ್ಷರ್ ವಿಜೇತ ,ಬೆಂಗಳೂರು : |

Indergarh- ಬೆಂಗಳೂರು ಕೇಂದ್ರ ನಗರ ಪಾಲಿಕೆ ಕಚೇರಿಗೆ ಇಂದು ಭೇಟಿ ನೀಡಿ ಎಂಜಿನಿಯರ್ ಮತ್ತು ಅಧಿಕಾರಿಗಳೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಸುರಿಯುತ್ತಿರುವ ಮಳೆಯ ಹಿನ್ನೆಲೆಯಲ್ಲಿ ಯಾವುದೇ ಅನಾಹುತಗಳು ಉಂಟಾಗದಂತೆ ಮುಂಜಾಗ್ರತಾ ಕ್ರಮ ವಹಿಸಲು, ರಸ್ತೆ ಗುಂಡಿಗಳು ಮತ್ತು ಇನ್ನಿತರೆ ಕಾಮಗಾರಿ ವಿಭಾಗಕ್ಕೆ ಸಂಬಂಧಿಸಿದ ವಿಷಯಗಳ ಕುರಿತಂತೆ ಸೂಕ್ತ ಕ್ರಮ ವಹಿಸಲು ಸೂಚನೆ ನೀಡಿದ್ದಾರೆ.ತ್ವರಿತಗತಿಯಲ್ಲಿ ರಸ್ತೆ ಗುಂಡಿ ಮುಚ್ಚಲು ಸೂಚನೆ: ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿ ವಿಭಾಗಕ್ಕೂ ಪ್ರತ್ಯೇಕ ಗುತ್ತಿಗೆದಾರರನ್ನು ನೇಮಿಸುವಂತೆ ಸೂಚನೆ ನೀಡಿ, ಪ್ರಮುಖ ರಸ್ತೆಗಳಲ್ಲಿನ ರಸ್ತೆ ಗುಂಡಿಗಳನ್ನು ತ್ವರಿತಗತಿಯಲ್ಲಿ ಮುಚ್ಚಲು ಸೂಚನೆ ನೀಡಿದರು. ರಸ್ತೆ ಗುಂಡಿಗಳಿಗೆ ಸಂಬಂಧಿಸಿದಂತೆ ವೆಬ್ ಅಥವಾ ಅಪ್ಲಿಕೇಶನ್ ಗಳಲ್ಲಿ ಯಾವುದೇ ದೂರು ಬಾಕಿ ಇರದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ಕೊಡಲಾಗಿದೆ.ಪ್ರಮುಖ ರಸ್ತೆಗಳ ಆದ್ಯತೆಯ ಜೊತೆಗೆ ಮಾದರಿ ರಸ್ತೆ ಅಭಿವೃದ್ಧಿ: ಸಿಬಿಡಿ ರಸ್ತೆಗಳು, ಟೆಂಡರ್ ಶ್ಯೂರ್ ರಸ್ತೆ, ವೈಟ್ ಟಾಪಿಂಗ್ ರಸ್ತೆಗಳು ಮತ್ತು ಹೈ ಡೆನ್ಸಿಟಿ ಕಾರಿಡಾರ್ ಗಳನ್ನು ಗುರುತಿಸಿ, ಮಾದರಿ ರಸ್ತೆಗಳನ್ನಾಗಿ ಮಾಡುವಂತೆ ಕಾರ್ಯಪಾಲಕ ಅಭಿಯಂತರರಿಗೆ ಸೂಚನೆ ನೀಡಿದರು. ಈ ರೀತಿ ಗುರುತಿಸಲ್ಪಡುವ ರಸ್ತೆಗಳಿಗೆ ರಸ್ತೆವಾರು ಪ್ರತ್ಯೇಕ ನೋಡಲ್ ಅಧಿಕಾರಿಗಳನ್ನು ನೇಮಿಸಿ ಈ ರಸ್ತೆಗಳ ನಿರ್ವಹಣೆ ಜವಾಬ್ದಾರಿಯನ್ನು ವಹಿಸಲು ಸೂಚಿಸಲಾಗಿದೆ.ಮುಂದುವರಿದು, ಮೆಟ್ರೋ ಪಿಲ್ಲರ್‌ಗಳ ಸೌಂದರೀಕರಣ, ರಸ್ತೆ ಇಕ್ಕೆಲಗಳ ಸೌಂದರೀಕರಣಕ್ಕಾಗಿ ಗಿಡಗಳನ್ನು ನೆಡುವಂತೆ, ಅಗತ್ಯ ಸ್ಥಳಗಳಲ್ಲಿ ಬೀದಿ ದೀಪಗಳನ್ನು ಅಳವಡಿಸುವಂತೆ ಹಾಗೂ ಅವುಗಳ ಸೂಕ್ತ ನಿರ್ವಹಣೆಗಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ಆಯುಕ್ತರು ಸೂಚಿಸಿದ್ದಾರೆ.ಪಾದಚಾರಿ ಮಾರ್ಗ ಒತ್ತುವರಿ ತೆರವು ಹಾಗೂ ತೀವ್ರ ಸ್ವಚ್ಛತಾ ಅಭಿಯಾನ: ಪ್ರತಿ ವಾರ ಒಂದು ರಸ್ತೆ ಮಾರ್ಗವನ್ನು ಗುರುತಿಸಿ, ಪಾದಚಾರಿ ಮಾರ್ಗ ಒತ್ತುವರಿದಾರರಿಗೆ ಒಂದು ದಿನದ ಮುಂಚಿತವಾಗಿ ನೋಟಿಸ್ ನೀಡಿ ಎಚ್ಚರಿಸಿ, ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ತೀವ್ರ ಸ್ವಚ್ಛತಾ ಅಭಿಯಾನ ನಡೆಸಲು ಆಯುಕ್ತರು ಸೂಚನೆ ಕೊಟ್ಟಿದ್ದಾರೆ. ಅಲ್ಲದೇ ಕಾರ್ಯಾಚರಣೆಯ ವೇಳೆ ಏಕ ಬಳಕೆ ಪ್ಲಾಸ್ಟಿಕ್ ತಪಾಸಣೆ ಸೇರಿದಂತೆ ಇತರೆ ವಿಷಯಗಳಲ್ಲೂ ಗಮನ ಹರಿಸಿ, ಎಲ್ಲಾ ವಿಭಾಗಗಳ ಅಧಿಕಾರಿಗಳೂ ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳುವಂತೆ ಆಯುಕ್ತರು ತಿಳಿಸಿದ್ದಾರೆ.

# ಮೆಟ್ರೋ ವಿಸ್ತರಣೆ, ಕನಕಪುರದಲ್ಲಿ ಹೊಸ ವೈದ್ಯಕೀಯ ಕಾಲೇಜು; ಜಮೀನು ಖರೀದಿಸಲು ರೂ.65.00 ಕೋಟಿ

ಅಕ್ಷರ್ ವಿಜೇತ ,ಬೆಂಗಳೂರು :



ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ತರಗತಿ 1 ರಿಂದ 10 ವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್, ಮುದ್ದೇನಹಳ್ಳಿ, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಸ್ಥೆಯ ವತಿಯಿಂದ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ಮಿಶ್ರಣ ಮಾಡಿ ವಿತರಿಸಲಾಗುತ್ತಿರುವ ಕಾರ್ಯಕ್ರಮವನ್ನು ವಾರದ ಮೂರು ದಿನಗಳ ಬದಲಾಗಿ ಐದು ದಿನಗಳಿಗೆ ವಿಸ್ತರಿಸಿ, ಸದರಿ ಯೋಜನೆಯ ಶೇಕಡಾ 25 ರಷ್ಟು ವೆಚ್ಚವನ್ನು ಅಂದರೆ ರೂ.27.02 ಕೋಟಿಗಳನ್ನು (ಸಾಗಾಣಿಕಾ ವೆಚ್ಚ ರೂ.6.49 ಕೋಟಿಗಳು ಸೇರಿ) ರಾಜ್ಯ ಸರ್ಕಾರದಿಂದ ಭರಿಸಲು ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ.ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಬೆಂಗಳೂರು ನಗರದ ವಿವಿಧ ಸ್ಥಳಗಳಲ್ಲಿ ಹೊಸದಾಗಿ 06 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ನಿರ್ಮಾಣ ಕಾಮಗಾರಿ ಹಾಗೂ 07 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (O&M) ಯ ರೂ.956.67 ಕೋಟಿಗಳ ಅಂದಾಜು ಮೊತ್ತದ ಯೋಜನೆಗೆ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ.ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಕೆಂಗೇರಿಯ 60 ಎಂ.ಎಲ್.ಡಿ ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು 80 ಎಂ.ಎಲ್.ಡಿ ಸಾಮರ್ಥ್ಯಕ್ಕೆ ಉನ್ನತೀಕರಿಸಲು ಎಲೆಕ್ಟ್ರೋÂಮೆಕಾನಿಕಲ್ ಉಪಕರಣಗಳನ್ನು ರೂ.28.88 ಕೋಟಿಗಳ ಅಂದಾಜು ಮೊತ್ತದಲ್ಲಿ ಅಳವಡಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು; ಸಚಿವ ಸಂಪುಟ ನಿರ್ಧರಿಸಿದೆ. ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಯಳಗೊಂಡನಹಳ್ಳಿ, ಕುರುಬರಹಳ್ಳಿ, ಅಣ್ಣಿಗೆರೆ ಮತ್ತು ವೈ.ಮಲ್ಲಾಪುರ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಭದ್ರಾ ಮೇಲ್ದಂಡೆ ಯೋಜನೆಯ ತುಮಕೂರು ಶಾಖಾ ಕಾಲುವೆಯ ಕಾಮಗಾರಿಗಳಿಗೆ ಅಗತ್ಯವಿರುವ ಸುಮಾರು 221 ಎಕರೆ 01.12 ಗುಂಟೆ ಜಮೀನನ್ನು ರೂ.77.35 ಕೋಟಿಗಳ ಮೊತ್ತದಲ್ಲಿ ನೇರ ಖರೀದಿಯ ಮೂಲಕ ಸ್ವಾಧೀನಪಡಿಸಿಕೊಳ್ಳಲು ಸಚಿವ ಸಂಪುಟ ನಿರ್ಣಯಿಸಿದೆ.

## ಧರ್ಮಸ್ಥಳಕ್ಕೆ ಬಿಜೆಪಿಯವರು ಭೇಟಿ ಜೊತೆಗೆ ಸೌಜನ್ಯ ಅವರ ಮನೆಗೂ ಭೇಟಿ

ನಗರಾಭಿವೃದ್ಧಿ ಇಲಾಖೆ (ಬಿಬಿಎಂಪಿ)ಯಡಿ ಬೆಂಗಳೂರು ಮೆಟ್ರೋ ರೈಲು ಯೋಜನೆಯ ಹಂತ-3ರ ಜೆ.ಪಿ ನಗರ 4ನೇ ಹಂತದಿAದ ಹೆಬ್ಬಾಳದವರೆಗೆ (ಓಆರ್ಆರ್ ಪಶ್ಚಿಮ) ಹಾಗೂ ಹೊಸಹಳ್ಳಿಯಿಂದ ಮಾಗಡಿ ರಸ್ತೆ ಮಾರ್ಗವಾಗಿ ಕಡಬಗೆರೆವರೆಗೆ ಎರಡು ಕಾರಿಡಾರ್‌ಗಳಲ್ಲಿ 37.121 ಕಿ.ಮೀ.ಗಳ ಉದ್ದದ ಡಬಲ್ ಡೆಕ್ಕರ್ ನಿರ್ಮಾಣದಲ್ಲಿ, ಮೆಟ್ರೋ ವಯಾಡಕ್ಟ್ ಜೊತೆಗೆ ಎಲಿವೇಟೆಡ್ ರಸ್ತೆಯನ್ನು ರೂ.9700.00 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಾಣ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ರಾಜ್ಯ ಸರ್ಕಾರವು 2025-26 ನೇ ಸಾಲಿನ ಬಜೆಟ್ಟಲ್ಲಿ ಒದಗಿಸಲಾದ ರೂ. 4000.00 ಕೋಟಿಗಳ ಬಜೆಟ್ ಅನುದಾನದ ಮೂಲಕ ಯೋಜನೆಯ ಸಂಪೂರ್ಣ ವೆಚ್ಚವನ್ನು ಭರಿಸುತ್ತದೆ ಮತ್ತು ಭವಿಷ್ಯದಲ್ಲಿ ಇದೇ ರೀತಿಯ ಅನುದಾನಗಳನ್ನು ನಿರೀಕ್ಷಿಸಲಾಗುತ್ತದೆ.ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ 107 ಕೆರೆಗಳಿಗೆ ಬೇಡ್ತಿ ನದಿಯಿಂದ ನೀರನ್ನು ಎತ್ತಿ ತುಂಬಿಸುವ ಯೋಜನೆಯನ್ನು ರೂ.179.50 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ. ವಿಜಯಪುರ ಜಿಲ್ಲೆಯ ಸಿಂಧಗಿ ಪುರಸಭೆಯಿಂದ ನಗರಸಭೆಯನ್ನು ರಚಿಸಿ "ಸಿಂಧಗಿ ನಗರಸಭೆ" ಪ್ರದೇಶವೆಂದು ಉದ್ಘೋಷಿಸಲು" ಸಚಿವ ಸಂಪುಟ ನಿರ್ಣಯಿಸಿದೆ. ಬೆಳಗಾವಿ ಜಿಲ್ಲೆಯ ಹಾಲಿ ಸವದತ್ತಿ ಯಲ್ಲಮ್ಮಾ ಪುರಸಭೆಯಿಂದ ನಗರಸಭೆಯನ್ನು ರಚಿಸಿ "ಸವದತ್ತಿ ಯಲ್ಲಮ್ಮ ನಗರಸಭೆ" ಪ್ರದೇಶವೆಂದು ಉದ್ಘೋಷಿಸಲು" ಸಚಿವ ಸಂಪುಟ ನಿರ್ಣಯಿಸಿದೆ. ಬೀದರ್ ಜಿಲ್ಲೆಯ ಹಾಲಿ ಹುಮನಾಬಾದ್ ಪುರಸಭೆಯಿಂದ ನಗರಸಭೆಯನ್ನು ರಚಿಸಿ "ಹುಮನಾಬಾದ್ ನಗರಸಭೆ" ಪ್ರದೇಶವೆಂದು ಉದ್ಘೋಷಿಸಲು" ಸಚಿವ ಸಂಪುಟ ನಿರ್ಣಯಿಸಿದೆ.

## ಪಡಿತರ ಚೀಟಿದಾರರಿಗೆ ಇನ್ಮುಂದೆ ಈ ಸೌಲಭ್ಯ ಇಲ್ಲ...ಇಲ್ಲಿದೆ ಸಂಪೂರ್ಣ ಮಾಹಿತಿ

ಸರಕಾರದ ಈ ಆದೇಶವು ಈ ಹಿಂದಿನಿಂದಲೇ ಜಾರಿಯಲ್ಲಿತ್ತು. ಆದರೆ, ಈ ಬಗ್ಗೆ ಮಾಹಿತಿ ಇಲ್ಲದೆ, ಕೆಲ ಗ್ರಾಹಕರು ಮಾತ್ರ ಅಂಗಡಿ ಮಾಲಕರನ್ನು ಬೆದರಿಸುತ್ತಿದ್ದಾರೆ ಎಂದು ಹೇಳಿದರು. ಇನ್ನು ಒನ್ ನೇಶನ್ ಒನ್ ರೇಶನ್ ಕಾರ್ಡ್ ಎಂಬ ಕೇಂದ್ರ ಸರ್ಕಾರದ ಆದೇಶದ ಪ್ರಕಾರ, ನಾವು ಯಾವುದೇ ಅರ್ಹ ವ್ಯಕ್ತಿ ಅಕ್ಕಿ ಕೇಳಿದರೂ ಕೊಡಬೇಕಾಗುತ್ತದೆ ಎಂದು ಹೇಳಿದರು.ಕರ್ನಾಟಕದ ಮಾಜಿ ಆಹಾರ ಸಚಿವ ಮತ್ತು ಈಗಿನ ಸ್ಪೀಕರ್ ಯು.ಟಿ. ಖಾದರ್ ಅವರು ಇತ್ತೀಚೆಗೆ ವಿಧಾನ ಸಭೆಯ ಕಲಾಪದಲ್ಲಿ ಎಲ್ಲಾ ಪಡಿತರ ಅಂಗಡಿದಾರರಿಗೆ ಹೆಚ್ಚುವರಿಯಾಗಿ ಶೇಕಡ 10ರಷ್ಟು ಅಕ್ಕಿ ವಿತರಣೆ ಮಾಡಬೇಕು ಎಂದು ತಿಳಿಸಿದ್ದಾರೆ. ಅದನ್ನು ತಕ್ಷಣ ಜಾರಿ ಮಾಡಬೇಕು ಹಾಗೂ ಎಪಿಎಲ್ ಕಾರ್ಡ್‌ದಾರರಿಗೂ ಅಕ್ಕಿಯನ್ನು ನೀಡಬೇಕು ಎಂದು ಆಗ್ರಹಿಸಿದರು.ಇನ್ನು ಈ ಬಗ್ಗೆ ಕಟೀಲ್ ನ್ಯಾಯಬೆಲೆ ಅಂಗಡಿ ಮಾಲೀಕ ಮಾತನಾಡಿ ತಮ್ಮ ಅಂಗಡಿಗೆ ಪರಿಸರದ ಗ್ರಾಹಕರಾದ ಇಬ್ಬರು ಸಹೋದರರು ಪ್ರತಿ ತಿಂಗಳು ಅಕ್ಕಿ ತೆಗೆದುಕೊಂಡು ಹೋಗಲು ಗೋಣಿಚೀಲ ನೀಡುವಂತೆ ಸುಮ್ಮನೆ ತಗಾದೆ ತೆಗೆಯುತ್ತಿದ್ದಾರೆ. ಇದನ್ನು ತಾನು ಆಕ್ಷೇಪಿಸಿದಕ್ಕೆ ತನ್ನ ವಿಡಿಯೋ ಮಾಡಿ ಸಾಮಾಜಿಕ ಜಾಲ ತಾಣದಲ್ಲಿ ಹರಿಬಿಟ್ಟಿದ್ದಾರೆ ಎಂದು ಅಳಲು ತೀಡಿಕೊಂಡರು.ಅಲ್ಲದೆ, ಕೆಲ ಗ್ರಾಹಕರು ನೀಡುವ ಹಿಂಸೆಯಿಂದ ನನಗೆ ತುಂಬಾ ಸಮಸ್ಯೆ ಆಗುತ್ತುದೆ. ಈ ಬಗ್ಗೆ ಆಹಾರ ಸಚಿವರು, ಆಹಾರ ಇಲಾಖೆಯ ಉಪನಿರ್ದೇಶಕರು ಪೊಲೀಸರಿಗೆ ದೂರು ನೀಡಿದ್ದಾಗಿದೆ. ಆದರೂ ನ್ಯಾಯ ಇದುವರೆಗೂ ಸಿಕ್ಕಿಲ್ಲ ಎಂದು ಹೇಳಿದರು. ಮತ್ತೊಂದೆಡೆ ಬಿಪಿಎಲ್ ಕಾರ್ಡ್ ಹೊಂದಲು ಆ ಸಹೋದರರ ಕುಟುಂಬಕ್ಕೆ ಅರ್ಹತೆ ಇಲ್ಲದಿದ್ದರೂ, ಬಿಪಿಎಲ್ ಕಾರ್ಡ್ ಹೊಂದಿದ್ದು, ಈ ಮೂಲಕ ಅಕ್ಕಿ ಪಡೆಯುತ್ತಿದ್ದಾರೆ ಅಂತಲೂ ಆರೋಪ ಮಾಡಿದ್ದಾರೆ. ರಾಜ್ಯದಲ್ಲಿ ಇದೊಂದೇ ಜಿಲ್ಲೆಯಲ್ಲಿ ಅಲ್ಲ, ಇಂತಹ ಸಮಸ್ಯೆಗಳು ಹಲವು ಜಿಲ್ಲೆಗಳಲ್ಲಿ ನಡೆಯುತ್ತಿವೆ. ಕೆಲ ಕಡೆ ಕೆಲವು ಗ್ರಾಹಕರು ಅಂಗಡಿ ಮಾಲೀಕರ ಮೇಲೆ ದಬ್ಬಾಳಿಕೆ ಮಾಡಿದರೆ, ಇನ್ನೂ ಕೆಲವೆಡೆ ಅಂಗಡಿ ಮಾಲೀಕರು ಗ್ರಾಹಕರ ಮೇಲೆ ದರ್ಪ ಮೆರೆಯುತ್ತಿರುವ ಆರೋಪ ಕೇಳಿಬರುತ್ತಿವೆ. ಸರ್ಕಾರವೇ ಇದಕ್ಕೆಲ್ಲಾ ಕಡಿವಾಣ ಹಾಕಬೇಕಿದೆ.

## ಬಿಜೆಪಿ ನಾಯಕರ ವಿರುದ್ಧ ವಿಡಿಯೋ: ಕ್ರಮಕ್ಕೆ ಆಗ್ರಹಿಸಿ ದೂರು



ಧರ್ಮಸ್ಥಳ ಚಲೋ ಮೆರವಣಿಗೆಯಲ್ಲಿ ತೆರಳುತ್ತಿದ್ದ ನಮ್ಮ ನಾಯಕರು ಮತ್ತು ಚುನಾಯಿತ ಪ್ರತಿನಿಧಿಗಳ ವಿಡಿಯೋ ಸೆರೆಹಿಡಿದು ಹಾನಿಕಾರಕ ಕಂಟೆಂಟ್ ಹಾಕಿದ್ದಾರೆ. ಇದನ್ನು ತಡೆಯಲು ಸರಕಾರ, ಗೃಹ ಇಲಾಖೆ ಕ್ರಮ ವಹಿಸಿಲ್ಲ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ಆಕ್ಷೇಪಿಸಿದ್ದಾರೆ.ಈ ಕುರಿತು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸೌಜನ್ಯ ವಿಚಾರದಲ್ಲಿ ಯಾವುದೇ ಒಪ್ಪಂದದ ನಡೆ ಇಲ್ಲ ಎಂದು ಸ್ಪಷ್ಟಪಡಿಸಿದರು. ಸೌಜನ್ಯರ ತಾಯಿ ಇಟ್ಟಿರುವ ಬೇಡಿಕೆಯ ಪರವಾಗಿ ಇರುವುದಾಗಿ ನಮ್ಮ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಅವರ ಮನೆಗೂ ಭೇಟಿ ಕೊಟ್ಟಿದ್ದಾರೆ ಎಂದರು. ಧರ್ಮದ ವಿಚಾರದಲ್ಲಿ ಇಂಥ ಹುಡುಗಾಟ ಮಾಡಿದರೆ, ನಾವು ಸಹಿಸುವುದಿಲ್ಲ ಎಂದರು.ಬೇರೆ ಯಾವುದೇ ಸಾಮಾಜಿಕ ಜಾಲತಾಣದ ಪೋಸ್ಟ್ ಬಂದಾಗ ತಕ್ಷಣ ಬಂಧಿಸುತ್ತಾರೆ. ಸಂಬಂಧಿತ ವ್ಯಕ್ತಿಯ ಮೇಲೆ ಕೂಡಲೇ ಕೇಸ್ ದಾಖಲಿಸಬೇಕು. ಸೋಷಿಯಲ್ ಮೀಡಿಯ ಕಂಟೆಂಟನ್ನು ತೆಗೆಸಿಹಾಕಬೇಕು ಎಂದು ಒತ್ತಾಯಿಸಿದರು. ಬಿಜೆಪಿ ನ್ಯಾಯಬದ್ಧವಾಗಿ ಹೋರಾಟ ಮಾಡಿದೆ. ಧರ್ಮರಕ್ಷಣೆಗಾಗಿ ಹೋರಾಟ ಮಾಡಿರುವುದು ದೇಶ, ರಾಜ್ಯದ ನಾನಾ ಭಾಗದ ಪ್ರತಿಯೊಬ್ಬ ಕಾರ್ಯಕರ್ತರು ಹಿಂದೂ ಸಮಾಜವನ್ನು ಕಾಪಾಡಬೇಕು; ಹಿಂದೂ ಸಮಾಜಕ್ಕೆ ಆತಂಕ ಬಂದಾಗ ಅಥವಾ ಧರ್ಮಸ್ಥಳದ ಶ್ರೀ ಮಂಜುನಾಥಸ್ವಾಮಿಗೆ ಯಾರೇ ಅಗೌರವ ತರಲು ಯಾರೇ ಪ್ರಯತ್ನ ಮಾಡಿದರೂ ನಾವು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.ಷಡ್ಯಂತ್ರ ವಿರೋಧಿಸಿ ಮತ್ತು ಸರಕಾರಕ್ಕೆ ಸ್ಪಷ್ಟ ಸಂದೇಶ ರವಾನಿಸಲು ನಾವು ಧರ್ಮಸ್ಥಳ ಚಲೋ ಹಮ್ಮಿಕೊಂಡಿದ್ದೆವು ಎಂದು ವಿವರಿಸಿದರು. ಸಾಮಾಜಿಕ ಜಾಲತಾಣದಲ್ಲಿ ರೀಲ್ಸ್ ಮಾಡಿ, ನಮ್ಮ ನಾಯಕರು, ಬಿಜೆಪಿ ಚುನಾಯಿತ ಪ್ರತಿನಿಧಿಗಳ ವಿಡಿಯೋ ಮಾಡಿ ಆಪಾದನೆ ಮಾಡಿದ್ದಾರೆ. ಈ ಕಂಟೆಂಟ್ ಹಾಕಿದ ವ್ಯಕ್ತಿಯ ಮೇಲೆ ಕೇಸು ದಾಖಲಿಸಬೇಕು ಮತ್ತು ಆ ಕಂಟೆಂಟನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು. ಈ ಕುರಿತು ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾಗಿ ತಿಳಿಸಿದರು.ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್ ಅಶ್ವತ್ಥನಾರಾಯಣ, ರಾಜ್ಯ ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಕು. ಸಿ. ಮಂಜುಳಾ, ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ, ಬಿಜೆಪಿ ರಾಜ್ಯ ಕಾನೂನು ಪ್ರಕೋಷ್ಠದ ಸಂಚಾಲಕ ವಸಂತ ಕುಮಾರ, ಬಿಜೆಪಿ ರಾಜ್ಯ ಮಾಧ್ಯಮ ಸಹ ಸಂಚಾಲಕ ಪ್ರಶಾಂತ್ ಕೆಡೆಂಜಿ ಮತ್ತು ವಕೀಲರ ತಂಡದವರು ಇದ್ದರು.

## ಸೆಪ್ಟೆಂಬರ್ ಆರಂಭದಲ್ಲೇ ಬಂಗಾರ ಬೆಲೆ ಭರ್ಜರಿ ಇಳಿಕೆ: ಇಲ್ಲಿದೆ ದರಪಟ್ಟಿ



ಕೇಂದ್ರ ಸರ್ಕಾರವು ಜಿಎಸ್‌ಟಿಗೆ ಸಂಬಂಧಿಸಿದಂತೆ ಹಲವು ಮಹತ್ವದ ಸುಧಾರಣೆಗಳನ್ನು ತಂದಿದೆ. ದೇಶದಲ್ಲಿ ಸರಕು ಮತ್ತು ಸೇವಾ ತೆರಿಗೆ **(GST)** ಪ್ರಾರಂಭಿಸಿದಾಗಿನಿಂದಲೂ ಇದರಲ್ಲಿ ಕೆಲವೊಂದು ಗೊಂದಗಳು ಇದ್ದವು. ಇದೀಗ ಜಿಎಸ್‌ಟಿ **2.0**ದಲ್ಲಿ ದೇಶದಾದ್ಯಂತ ಕೆಲವೊಂದು ಮಹತ್ವದ ಬದಲಾವಣೆಗಳನ್ನು ತರಲಾಗಿದೆ. ಅಲ್ಲದೇ ಇದೇ ಸಂದರ್ಭದಲ್ಲಿ ತಂಬಾಕು ಹಾಗೂ ಗುಟ್ಕಾ ಸೇರಿದಂತೆ ಕೆಲವೊಂದು ವಸ್ತುಗಳ ಮೇಲೆ ವಿಪರೀತವಾದ ತೆರಿಗೆಯನ್ನು ವಿಧಿಸಲಾಗಿದೆ. ಹಾಗದರೆ ಮದ್ಯದ ಕಥೆ ಏನು. ಮದ್ಯದ ಬೆಲೆ ಏರಿಕೆ ಆಗಿದೆಯೇ ಅಥವಾ ಮುಂದಿನ ದಿನಗಳಲ್ಲಿ ಆಗಲಿದೆಯೇ ಎನ್ನುವ ಸಂಪೂರ್ಣ ವಿವರ ಇಲ್ಲಿದೆ.ಭಾರತದ ಸರಕು ಮತ್ತು ಸೇವಾ ತೆರಿಗೆ **(GST)** ವ್ಯಾಪ್ತಿಯಲ್ಲಿ ಮದ್ಯವನ್ನು ಸೇರಿಸಿಲ್ಲ. ಇದರಿಂದ ಮದ್ಯ ಪ್ರಿಯರಿಗೆ ಗುಡ್‌ನ್ಯೂಸ್ ಕೊಟ್ಟಂತೆ ಆಗಿದೆ. ಮದ್ಯ ಪ್ರಿಯರಿಗೆ ಈಗಗಾಲೇ ಬೆಲೆ ಏರಿಕೆಯ ಶಾಕ್ ಉಂಟಾಗಿದೆ. ಜಿಎಸ್‌ಟಿ ಪರಿಷ್ಕರಣೆಯ ಸಂದರ್ಭದಲ್ಲಿ ಮದ್ಯವೂ ಜಿಎಸ್‌ಟಿ ವ್ಯಾಪ್ತಿಗೆ ಸೇರಲಿದೆಯೇ ಎನ್ನುವ ಪ್ರಶ್ನೆ ಮೂಡಿತ್ತು. ಆದರೆ, ಕೇಂದ್ರ ಸರ್ಕಾರ ಈ ವಿಚಾರದಲ್ಲಿ ಯಾವುದೇ ಮಹತ್ವದ ಬದಲಾವಣೆಯನ್ನು ಮಾಡಿಲ್ಲ. **Sin Goods** ಅಥವಾ **Sin Tax** ವ್ಯಾಪ್ತಿಯಲ್ಲಿ ಮದ್ಯವನ್ನು ಸೇರಿಸಿಲ್ಲ.ಮದ್ಯವನ್ನು ಮೊದಲಿನಿಂದಲೂ ಜಿಎಸ್‌ಟಿ ವ್ಯಾಪ್ತಿಗೆ ತಂದಿರಲಿಲ್ಲ. ಈ ಬಾರಿಯೂ ಜಿಎಸ್‌ಟಿ ಪರಿಷ್ಕರಣೆ ಮಾಡುವಾಗ ಮದ್ಯವನ್ನು ಜಿಎಸ್‌ಟಿ ವ್ಯಾಪ್ತಿಗೆ ತರಲಾಗುತ್ತದೆಯೇ ಎನ್ನುವ ವಿಷಯ ಭಾರೀ ಚರ್ಚೆಗೆ ಕಾರಣವಾಗಿತ್ತು. ಆದರೆ ರಾಜ್ಯಗಳು ಅಬಕಾರಿ ಸುಂಕ ಮತ್ತು **VAT** ನಂತಹ ತಮ್ಮದೇ ಆದ ತೆರಿಗೆಗಳನ್ನು ವಿಧಿಸಲು ಅನುವು ಮಾಡಿಕೊಡುವ ಉದ್ದೇಶದಿಂದ ಈಗಲೂ ಮದ್ಯವನ್ನು ಜಿಎಸ್‌ಟಿ ವ್ಯಾಪ್ತಿಯಿಂದ ಹೊರಗೆ ಉಳಿಸಲಾಗಿದೆ. ಮದ್ಯ ಮಾರಾಟದಿಂದ ರಾಜ್ಯಗಳಿಗೆ ಅಪಾರವಾದ ಆದಾಯ ಹರಿದು ಬರುತದೆ. ಅಲ್ಲದೇ ಮದ್ಯವನ್ನು ಏಕೀಕೃತ **GST** ಚೌಕಟ್ಟಿನ ಅಡಿಯಲ್ಲಿ ತಂದರೆ ನಷ್ಟವಾಗುತ್ತದೆ. ಈ ಎಲ್ಲಾ ಕಾರಣಗಳಿಗಾಗಿ, ಮದ್ಯವನ್ನು ಜಿಎಸ್‌ಟಿ ವ್ಯಾಪ್ತಿಯಿಂದ ಹೊರಗೆ ಉಳಿಸಲಾಗಿದೆ. ಈ ಮೂಲಕ ಮದ್ಯ ಪ್ರಿಯರಿಗೆ ಗುಡ್‌ನ್ಯೂಸ್ ಸಿಕ್ಕಂತಾಗಿದೆ.

## ಬೆಂಗಳೂರು ಹೊಸ ಪಾಲಿಕೆ: ಇ ಖಾತಾ & ಆಸ್ತಿ ತೆರಿಗೆ ಪಾವತಿ ಹೇಗೆ ?

ಬೆಂಗಳೂರಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬದಲಾಗಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಿದೆ. ಈ ಸಂದರ್ಭದಲ್ಲಿ ಬೆಂಗಳೂರು ನಗರದಲ್ಲಿ ಆಸ್ತಿ ತೆರಿಗೆ ಸಂಗ್ರಹ ಹಾಗೂ ಇ ಖಾತಾ ಪ್ರಕ್ರಿಯೆ ಹೇಗೆ ಎನ್ನುವ ವಿಚಾರಗಳಲ್ಲಿ ಜನರಿಗೆ ಗೊಂದಲ ಮೂಡಿದೆ. ಈ ನಿಟ್ಟಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾದ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಕೆಲವೊಂದು ಪ್ರಮುಖ ಸೂಚನೆಗಳನ್ನು ಕೊಟ್ಟಿದ್ದಾರೆ.ಅಲ್ಲದೇ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಮುಖವಾಗಿ ಎಲ್ಲಾ ವಿಭಾಗಗಳ ಕುರಿತು ಸಮಗ್ರ ಪರಿಚಯ ಹಾಗೂ ವಿಶೇಷವಾಗಿ **03** ವಿಷಯಗಳಾದ ರಸ್ತೆ ಗುಂಡಿ, ಬೀದಿ ದೀಪ ಹಾಗೂ ಕಸದ ಸಮಸ್ಯೆ ನಿವಾರಣೆಗೆ ಮೊದಲ ಆದ್ಯತೆ ನೀಡಬೇಕು ಎಂದಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ **5** ನಗರ ಪಾಲಿಕೆಗಳ ಅಧಿಕಾರಿಗಳ ಜೊತೆ ಮಲ್ಲೇಶ್ವರಂನ ಐ.ಪಿ.ಪಿ ಕೇಂದ್ರದಲ್ಲಿ ಮೊದಲ ಸಭೆ ನಡೆಸಿದ ವೇಳೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ನಾಗರಿಕರಿಗೆ ಉತ್ತಮ ಆಡಳಿತ ಹಾಗೂ ಪರಿಣಾಮಕಾರಿಯಾಗಿ ಯೋಜನೆಗಳನ್ನು ಜಾರಿಗೊಳಿಸುವ ಸಲುವಾಗಿ ಜಿ.ಬಿ.ಎ ಜಾರಿಗೆ ತಂದು **5** ನಗರ ಪಾಲಿಕೆಗಳನ್ನು ಅಸ್ತಿತ್ವಕ್ಕೆ ತರಲಾಗಿದೆ. ಹೊಸದಾಗಿ ನೇಮಕಗೊಂಡ ಎಲ್ಲಾ ಅಧಿಕಾರಿಗಳಿಗೂ ಎಲ್ಲಾ ರೀತಿಯ ಸಹಕಾರ ಮತ್ತು ಸೌಲಭ್ಯಗಳನ್ನು ನೀಡಲಾಗುವುದು ಎಂದಿದ್ದಾರೆ.ನಗರದಲ್ಲಿ ಕಸದ ಸಮಸ್ಯೆ ನಿವಾರಣೆಗಾಗಿ ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತವು **5** ನಗರ ಪಾಲಿಕೆಗಳ ಜೊತೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲಿದೆ. ಬೆಂಗಳೂರು ಅತೀ ಮುಖ್ಯವಾದ ಸ್ಥಳವಾಗಿದ್ದು, ಅದನ್ನು ನಾವೆಲ್ಲರೂ ಸೇರಿ ಮೇಲ್ದರ್ಜೆಗೆ ತಂದು ಜನ ಮೆಚ್ಚುವ ಕೆಲಸ ಮಾಡಬೇಕೆಂದು ತಿಳಿಸಿದರು. ಜಿ.ಬಿ.ಎ ಹಾಗೂ **5** ನಗರ ಪಾಲಿಕೆಗಳ ಸಮನ್ವಯದಿಂದ ಕೆಲಸ ಮಾಡಿ, ಇರುವ ಸಮಸ್ಯೆಗಳನ್ನು ಹಂತ-ಹಂತವಾಗಿ ನಿವಾರಣೆ ಮಾಡಬೇಕು ಎಂದು ಹೇಳಿದ್ದಾರೆ.ನವೆಂಬರ್ **1, 2025** ರಂದು ಎಲ್ಲಾ ನಗರ ಪಾಲಿಕೆಗಳ ಕಚೇರಿಗಳಿಗೆ ಶಂಕುಸ್ಥಾಪನೆ ಮಾಡಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಈ ಪೈಕಿ ಎಲ್ಲರಿಗೂ ಅನುಕೂಲವಾಗುವಂತಹ ಉತ್ತಮ ಸ್ಥಳಗಳನ್ನು ಗುರುತಿಸಿ ಅಂತಿಮಗೊಳಿಸಿದೆ. ಈಗಾಗಲೇ ಯೋಜನಾ ವಿಭಾಗ, ಬೃಹತ್ ನೀರುಗಾಲುವೆ, ವರ್ಲ್ಡ್ ಬ್ಯಾಂಕ್ ಯೋಜನೆ ಕಾಮಗಾರಿಗಳನ್ನು ಆಯಾ ನಗರ ಪಾಲಿಕೆಗಳಿಗೆ ಹಂಚಿಕೆ ಮಾಡಲಾಗಿದ್ದು, ಆಯಾ ಕಾಮಗಾರಿಗಳನ್ನು ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ನಾಮಫಲಕಗಳನ್ನು ಅಳವಡಿಸಿ: ಸರ್ಕಾರದಿಂದ ಈಗಾಗಲೇ **5** ನಗರ ಪಾಲಿಕೆಗಳಿಗೆ ಗಡಿಗಳನ್ನು ಗುರುತಿಸಿದ್ದು, ನಾಗರಿಕರಿಗೆ ಯಾವ ನಗರ ಪಾಲಿಕೆಗೆ ಬರಲಿದ್ದೇವೆ ಎಂಬ ಗೊಂದಲಗಳಿವೆ. ಈ ಸಂಬಂಧ ಆಯಾ ನಗರ ಪಾಲಿಕೆಗಳಲ್ಲಿ ಕೂಡಲೇ ನಾಮಫಲಕಗಳನ್ನು ಅಳವಡಿಸಬೇಕು. ಪಾಲಿಕೆಗಳ ಗಡಿಗಳಲ್ಲಿ ಸರಿಯಾದ ರೀತಿಯಲ್ಲಿ ಗಡಿ ನಿಗದಿಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ರವರು ಮಾತನಾಡಿ, ಜಿ.ಬಿ.ಎ. ವ್ಯಾಪ್ತಿಯಲ್ಲಿ ಈ ಸಾಲಿನಲ್ಲಿ ರೂ.**6,700/-** ಕೋಟಿ ಆಸ್ತಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಲಾಗಿದ್ದು, ಈ ಪೈಕಿ ಈವರೆಗೆ ರೂ.**3,217/-** ಕೋಟಿ ಸಂಗ್ರಹಿಸಲಾಗಿದ್ದು, ರೂ.**3,483/-** ಕೋಟಿ ಸಂಗ್ರಹಿಸಬೇಕಿದೆ. ಅಲ್ಲದೇಸುಮಾರು **2.75** ಲಕ್ಷ ಆಸ್ತಿ ಸುಸ್ತಿದಾರರಿಂದ ರೂ.**786** ಕೋಟಿ ತೆರಿಗೆ ಸಂಗ್ರಹಿಸಬೇಕಿದ್ದು, ಅವರೆಲ್ಲರಿಗೂ ಎಲೆಕ್ಟ್ರಾನಿಕ್ ಡಿಮಾಂಡ್ ನೋಟೀಸ್ ನಿಡಲಾಗಿದೆ. ಈ ಸಂಬಂಧ ಆಯಾ ನಗರ ಪಾಲಿಕೆಗಳಲ್ಲಿ ಆಸ್ತಿ ತೆರಿಗೆ ಹಾಗೂ ಹೆಚ್ಚು ಬಾಕಿ ಉಳಿಸಿಕೊಂಡಿರುವ ಸುಸ್ತಿದಾರರಿಂದ ತ್ವರಿತಗತಿಯಲ್ಲಿ ಆಸ್ತಿ ತೆರಿಗೆಯನ್ನು ಸಂಗ್ರಹಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.ನಗರದಲ್ಲಿ **25** ಲಕ್ಷ ಆಸ್ತಿಗಳಿದ್ದು, ಎಲ್ಲಾ ಆಸ್ತಿಗಳಿಗೂ ಆನ್ ಲೈನ್ ಮೂಲಕ ಡ್ರಾಫ್ಟ್ (ಕರಡು) ಇ-ಖಾತಾಗಳನ್ನು ಪಡೆಯಬಹುದಾಗಿದೆ. ಈವರಗೆ **7.5** ಲಕ್ಷ ಅಂತಿಮ ಇ-ಖಾತಾಗಳನ್ನು ವಿತರಣೆ ಮಾಡಲಾಗಿದೆ.

## ಯಡಿಯೂರಪ್ಪ ಅವರಂತೆ ಜೈಲಿಗೆ ಹೋಗಲು ನಾನು ಸಿದ್ದನಿಲ್ಲ: ಡಿ ಕೆ ಶಿವಕುಮಾರ್ ಹೀಗೆ ಹೇಳಿದ್ಯಾಕೆ?

**ಅಕ್ಷರ್ ವಿಜೇತ ,ರಾಮನಗರ :**

ಬಿಡದಿ ಟೌನ್ ಶಿಪ್ ನಿರ್ಮಾಣಕ್ಕೆ ತೀರ್ಮಾನ ಮಾಡಿದ್ದು ಕುಮಾರಸ್ವಾಮಿ ಅವರು. ಇದನ್ನು ನಾನು ಡಿನೋಟಿಫಿಕೇಷನ್ ಮಾಡಿ ಯಡಿಯೂರಪ್ಪ ಅವರಂತೆ ಜೈಲಿಗೆ ಹೋಗಲು ತಯಾರಿಲ್ಲ. ಕಾನೂನು ಚೌಕಟ್ಟಿನಲ್ಲಿ ರೈತರಿಗೆ ನೆರವಾಗಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.ಭೂಸ್ವಾಧೀನ ವಿರೋಧಿಸಿ ರಾಮನಗರದ ಜಿಲ್ಲಾಧಿಕಾರಿ ಕಚೇರಿ ಪ್ರತಿಭಟನಾ ನಿರತ ರೈತರನ್ನು ಉದ್ದೇಶಿಸಿ ಗುರುವಾರ ಮಾತನಾಡಿದ ಡಿ ಕೆ ಶಿವಕುಮಾರ್, ನಾನು ಹೊರಗಡೆಯಿಂದ ಬಂದವನಲ್ಲ. ನಾನು ಕೂಡ ನಿಮ್ಮ ಜಿಲ್ಲೆಯವನೇ. ಬಿಡದಿ ಕೈಗಾರಿಕಾ ಪ್ರದೇಶ ಮಾಡಿದಾಗ ಯಾವ ಸರ್ಕಾರ ಅಧಿಕಾರದಲ್ಲಿತ್ತು ಎಂಬುದು ರೈತರಿಗೆ ತಿಳಿದಿದೆ. ಇದರಿಂದ 16 ಸಾವಿರ ಎಕರೆ ಭೂಮಿ ಹೋಯಿತು. ಟೊಯೋಟೊ ಸೇರಿದಂತೆ ಒಂದಷ್ಟು ಕಂಪನಿಗಳು ಈ ಭಾಗಕ್ಕೆ ಬಂದವು. ಈ ಹಿಂದೆ ಕೈಗಾರಿಕಾ ಪ್ರದೇಶವಾದಾಗ ನನ್ನದೂ ಸಹ 12 ಎಕರೆ ಜಮೀನು ಹೋಗಿದೆ. ಆಗ ಪರಿಹಾರವನ್ನು 8 ಲಕ್ಷಕ್ಕೆ ಮೀರಿ ನೀಡಿಯೇ ಇಲ್ಲ ಎಂದರು.ನಿಮಗೆ ಉತ್ತಮ ಪರಿಹಾರ ನೀಡಲು ಸುಮಾರು 10 ಸಾವಿರ ಕೋಟಿ ರೂ. ಸಾಲ ಮಾಡುವ ಬಗ್ಗೆ ಚರ್ಚೆ ನಡೆಸಲಾಗಿದೆ. ನಿಮ್ಮ ಒಂದು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳುವ ಅವಶ್ಯಕತೆ ನಮಗಿಲ್ಲ. ಸ್ವಾಧೀನವಾಗಿರುವ ಭೂಮಿಯನ್ನು ಕಾನೂನು ಚೌಕಟ್ಟು ಮೀರಿ ಕೈ ಬಿಡುವ ಹಂತದಲ್ಲಿ ನಾನಿಲ್ಲ ಎಂದರು. ಕುಮಾರಸ್ವಾಮಿ ಅವರ ಧರ್ಮಪತ್ನಿಯವರು ಹಾಗೂ ಮಗ ಸೇರಿದಂತೆ ಶೇ.70 ರಷ್ಟು ಮಂದಿ ಪರಿಹಾರ ನೀಡಿ ಎಂದು ಭೂಸ್ವಾಧೀನಕ್ಕೆ ಒಪ್ಪಿಗೆ ಸೂಚಿಸಿದ್ದಾರೆ. ಶೇ.30 ರಷ್ಟು ಮಂದಿ ಮಾತ್ರ ಒಪ್ಪಿಗೆ ನೀಡಿಲ್ಲ. ಆದರೆ ನಾನು ನಿಮ್ಮ ಪರವಾಗಿ ಏನು ತೀರ್ಮಾನ ತೆಗೆದುಕೊಳ್ಳಬೇಕು. ಯಾವ ರೀತಿ ಸಹಾಯ ಮಾಡಬೇಕು ಎಂದು ಚರ್ಚೆ ನಡೆಸುತ್ತೇನೆ ಎಂದು ತಿಳಿಸಿದರು.



### ನಾನು ಕೇವಲ ಬಿಡದಿ ಪ್ರದೇಶಕ್ಕೆ ಮಾತ್ರ ವಿಶೇಷವಾಗಿ ತೀರ್ಮಾನ ತೆಗೆದುಕೊಳ್ಳಲು ಕಾನೂನಿನಲ್ಲಿ ಸಾಧ್ಯವಿಲ್ಲ

ನಾನು ಕೇವಲ ಬಿಡದಿ ಪ್ರದೇಶಕ್ಕೆ ಮಾತ್ರ ವಿಶೇಷವಾಗಿ ತೀರ್ಮಾನ ತೆಗೆದುಕೊಳ್ಳಲು ಕಾನೂನಿನಲ್ಲಿ ಸಾಧ್ಯವಿಲ್ಲ. ತೀರ್ಮಾನ ತೆಗೆದುಕೊಂಡರೆ ಇಡೀ ರಾಜ್ಯದ ಎಲ್ಲಾ ಭೂ ಸ್ವಾಧೀನಗಳ ಮೇಲೆ ಪರಿಣಾಮ ಬೀರಲಿದೆ. ಈ ಪ್ರದೇಶವನ್ನು ಕೈ ಬಿಡಬೇಕು ಎನ್ನುವ ಒತ್ತಡ ಕೂಡ ಇತ್ತು. ಆದರೆ ಕಾನೂನಿನ ಚೌಕಟ್ಟಿನಲ್ಲಿ ಡಿನೋಟಿಫಿಕೇಷನ್ ಮಾಡಲು ಆಗುವುದಿಲ್ಲ ಎನ್ನುವ ಅಭಿಪ್ರಾಯಗಳು ಬಂದಿವೆ ಎಂದರು.ಬಿಡದಿಯ ರೈತರಿಗೆ ಸಹಾಯ ಮಾಡಬೇಕು ಎಂದು ಮಾಜಿ ಸಂಸದರಾದ ಡಿ.ಕೆ.ಸುರೇಶ್ ಅವರು, ಶಾಸಕರಾದ ಬಾಲಕೃಷ್ಣ ಅವರು ಹಲವಾರು ಸಭೆಗಳನ್ನು ನಡೆಸಿದ್ದಾರೆ. ನಿಮ್ಮ ಪರವಾಗಿ ಅವರಿಗೂ ಜವಾಬ್ದಾರಿಯಿದೆ ಎಂದರು. ಈ ವೇಳೆ ಶಾಸಕ ಬಾಲಕೃಷ್ಣ ಅವರು ರೈತರ ಪರವಿಲ್ಲ ಎಂದು ಪ್ರತಿಭಟನಾ ನಿರತ ರೈತರು ಆಕ್ಷೇಪ ವ್ಯಕ್ತಪಡಿಸಿದಾಗ, "ಬಾಲಕೃಷ್ಣ ಅವರು ನಿಮ್ಮ ಪರವಾಗಿ ಎಷ್ಟು ಹೋರಾಟ ಮಾಡಿದ್ದಾರೆ ಎಂಬುದು ನನಗೆ ತಿಳಿದಿದೆ.

### ನನ್ನ ಹಿಂದೆ ಬಿದ್ದು ರೈತರ ಪರವಾಗಿ ಮಾತನಾಡಿದ್ದಾರೆ

ನನ್ನ ಹಿಂದೆ ಬಿದ್ದು ರೈತರ ಪರವಾಗಿ ಮಾತನಾಡಿದ್ದಾರೆ. ನಿಮ್ಮ ಭೂಮಿಗಳನ್ನು ಸ್ವಾಧೀನ ಪಡಿಸಿಕೊಳ್ಳಲು ಹಿಂದೆ ಸಹಿ ಹಾಕಿದವರು ನಿಮ್ಮ ಪರವಾಗಿದ್ದಾರಾ? ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ರೂ.1 ಕೋಟಿ ಪರಿಹಾರ ನಿಗದಿ ಮಾಡಿದವರು ನಿಮ್ಮ ಪರವಾಗಿದ್ದಾರಾ? ಅವರುಗಳು ಯಾರೂ ನಿಮ್ಮ ಪರವಾಗಿಲ್ಲ. ರೈತರಿಗೆ ಉತ್ತಮ ಪರಿಹಾರ ದೊರೆಯಬೇಕು ಎಂದು ಹೋರಾಟ ಮಾಡುತ್ತಿರುವ ಶಾಸಕ ಬಾಲಕೃಷ್ಣ ನಿಮ್ಮ ಪರವಾಗಿದ್ದಾರೆ. ನಿಮ್ಮ ಪರವಾಗಿ ಇವರಷ್ಟು ಹೋರಾಟವನ್ನು ಬೇರೆ ಯಾರೂ ಸಹ ಮಾಡಿಲ್ಲ ಎಂದರು.ಡಿಎಲ್ ಎಫ್ ಕಂಪೆನಿಯವರು ಈ ಪ್ರದೇಶವನ್ನು ತೆಗೆದುಕೊಂಡರು. ಆ ನಂತರ ಇಲ್ಲಿನ ವೃಷಭಾವತಿ ನೀರು ಸೇರಿದಂತೆ ಇತರೇ ಸಂಗತಿಗಳನ್ನು ಗಮನಿಸಿ ನಮ್ಮಿಂದ ಟೌನ್ ಶಿಪ್ ಮಾಡಲು ಸಾಧ್ಯವಿಲ್ಲ ಎಂದು ಯೋಜನೆ ಕೈ ಬಿಟ್ಟರು. 9,600 ಎಕರೆ ಪ್ರದೇಶದಲ್ಲಿ ಸುಮಾರು 912 ಎಕರೆ ಪ್ರದೇಶವನ್ನು ಕೈಗಾರಿಕೆಗೆ ಎಂದು ನೀಡಲಾಯಿತು. ಎಕರೆಗೆ ರೂ.1 ಕೋಟಿ ಹಾಗೂ ಅದಕ್ಕಿಂತ ಹೆಚ್ಚು ಪರಿಹಾರ ಹಣವನ್ನು ನಿಗದಿ ಪಡಿಸಲಾಯಿತು. ಆಗ ಯಾರೂ ಸಹ ವಿರೋಧ ಮಾಡಲಿಲ್ಲ. ಈಗ ಏಕೆ ವಿರೋಧ ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು.

# ಸೌಜನ್ಯ ಕೊಲೆ ಪ್ರಕರಣ; ಸುಪ್ರೀಂ ಮೆಟ್ಟಿಲೇರಿದರೆ ಹೋರಾಟದ ಖರ್ಚಿನ ಹೊಣೆ ಹೊತ್ತ ಬಿ ವೈ ವಿಜಯೇಂದ್ರ



ಅಕ್ಷರ್ ವಿಜೇತ ,ಬೆಂಗಳೂರು : |

ಬಿಜೆಪಿ ಶ್ರೀ ಕ್ಷೇತ್ರ ಧರ್ಮಸ್ಥಳದ ಕೋಟ್ಯಂತರ ಭಕ್ತರ ಪರವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಸರಕಾರಕ್ಕೆ ಸಮೀರ್ನಂಥ ದೇಶದ್ರೋಹಿಯನ್ನು ಒದ್ದು ಒಳಗೆ ಹಾಕಲು ಆಗುತ್ತಿಲ್ಲ. ರಾಜ್ಯ ಕಾಂಗ್ರೆಸ್ ಸರಕಾರವು ಸಮೀರ್ ಜಾಮೀನು ರದ್ದು ಮಾಡುವಂತೆ ಯಾಕೆ ಅರ್ಜಿ ಸಲ್ಲಿಸಿಲ್ಲ ಎಂದು ಪ್ರಶ್ನಿಸಿದರು. ಸಿಎಂ ಸಿದ್ದರಾಮಯ್ಯನವರ ಪ್ರಶ್ನೆಗೆ ಅವರು ಈ ರೀತಿ ಉತ್ತರ ನೀಡಿದರು. ಇದೆಲ್ಲ ಹಿನ್ನೆಲೆಯಲ್ಲಿ ನಾವು ಧರ್ಮಸ್ಥಳ ಚಲೋ ಹಮ್ಮಿಕೊಂಡಿದ್ದೆವು ಎಂದು ತಿಳಿಸಿದರು.ಸೌಜನ್ಯ ವಿಚಾರ ಬಂದಾಗ ರಾಜ್ಯಾಧ್ಯಕ್ಷನಾಗಿ ನನಗೂ ಅನಿಸಿತ್ತು. ಸೌಜನ್ಯ ತಾಯಿ, ಕುಟುಂಬದ ಸದಸ್ಯರನ್ನು ಭೇಟಿ ಮಾಡಬೇಕೆಂದು ನಾನು ತೀರ್ಮಾನ ಮಾಡಿದೆ. ಸೌಜನ್ಯ ಬರ್ಬರ ಹತ್ಯೆಯಾಗಿ **12** ವರ್ಷ ಕಳೆದರೂ, ತಡವಾಗಿದ್ದರೂ, ಮಾನವೀಯತೆ ದೃಷ್ಟಿಯಿಂದ ಅಧ್ಯಕ್ಷನಾಗಿ ಭೇಟಿ ಮಾಡಿ ಸಾಂತ್ವನ ಹೇಳಿದ್ದೇನೆ. ಮುಂದೆ ಸುಪ್ರೀಂ ಕೋರ್ಟಿಗೆ ಹೋದರೆ ಅದರ ವೆಚ್ಚ ಭರಿಸುವ ಭರವಸೆ ಕೊಟ್ಟಿದ್ದೇನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಹೇಳಿದರುರಾಜ್ಯದ ಮುಖ್ಯಮಂತ್ರಿಗಳು ಆ ಕೋಟ್ಯಂತರ ಭಕ್ತರ ತಾಳ್ಮೆ, ಸಹನೆಯನ್ನು ಪರೀಕ್ಷೆ ಮಾಡಲು ಹೋಗಬಾರದು ಎಂದು ಭಕ್ತರ ಪರವಾಗಿ ಕೋರಿದರು. ನೀವು ಪ್ರಾಮಾಣಿಕರೇ ಆಗಿದ್ದರೆ ಯಾಕೆ ಆ ಸಮೀರ್ ಗೆ ಜಾಮೀನು ಆಗಿದೆ ಎಂದು ಕೈ ಕಟ್ಟಿ ಕುಳಿತಿದ್ದೀರಿ? ನೀವು ನಿಜವಾಗಿಯೂ ಪ್ರಾಮಾಣಿಕರೇ ಆಗಿದ್ದರೆ ಸಮೀರ್‌ನ ಜಾಮೀನು ರದ್ದು ಅರ್ಜಿ ಯಾಕೆ ಸಲ್ಲಿಸಿಲ್ಲ? ಎಂದು ಬಿ ವೈ ವಿಜಯೇಂದ್ರ ಅವರು ಕೇಳಿದರು.ತನಿಖೆ ಪಾರದರ್ಶಕವಾಗಿ ಆಗಬೇಕೆಂದು ಬಿಜೆಪಿ ಸುಮ್ಮನೆ ಇದ್ದಿದ್ದೇ ತಪ್ಪಾಯಿತೇ ಎಂದು ಪ್ರಶ್ನಿಸಿದರು. ಸಮೀರ್ ಬೇಲ್ ರದ್ದತಿಗೆ ಸರಕಾರ ಯಾಕೆ ಮೀನಾಮೇಷ ಮಾಡುತ್ತಿದೆ ಎಂದು ಕೇಳಿದರು. ಬಿಜೆಪಿಯಿಂದ ಧರ್ಮಸ್ಥಳ ಚಲೋ ನಮ್ಮ ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದೆ ಎಂದು ವಿಜಯೇಂದ್ರ ಅವರು ತಿಳಿಸಿದರು.

ಅಪಪ್ರಚಾರದ ಕಾರಣದಿಂದ ಶ್ರೀ ಮಂಜುನಾಥ ಸ್ವಾಮಿಯ ಕೋಟ್ಯಂತರ ಭಕ್ತರಿಗೆ ನೋವಾಗುತ್ತಿದೆ. ಮತ್ತೊಂದು ಕಡೆ ರಾಜ್ಯ ಸರಕಾರದ ಎಸ್‌ಐಟಿ ತನಿಖೆ ದಿನೇದಿನೇ ತಡವಾಗುತ್ತಿದೆ. ಇದರ ಪರಿಣಾಮವಾಗಿ ಅಸಂಖ್ಯಾತ ಭಕ್ತರು ನೊಂದಿದ್ದರು. ಇವೆಲ್ಲ ವಿಚಾರಗಳನ್ನು ಇಟ್ಟುಕೊಂಡು ನಾವು ಧರ್ಮಸ್ಥಳ ಚಲೋ ಕರೆ ನೀಡಿದ್ದೆವು. ರಾಜ್ಯದ ಪ್ರತಿಯೊಂದು ಜಿಲ್ಲೆಗಳಿಂದ, ಪ್ರತಿ ವಿಧಾನಸಭಾ ಕ್ಷೇತ್ರದಿಂದ ಒಂದು ಲಕ್ಷಕ್ಕೂ ಹೆಚ್ಚು ಕಾರ್ಯಕರ್ತರು ಬಂದಿದ್ದರು. ಹಿಂದೂ ಕಾರ್ಯಕರ್ತರು ಬಂದಿದ್ದಾರೆ. ಯಶಸ್ವಿಯಾಗಿ ಕಾರ್ಯಕ್ರಮ ನಡೆದಿದೆ ಎಂದು ವಿವರಿಸಿದರು.

# 3 ತಿಂಗಳ 6000 ಹಣ: ಗೃಹ ಲಕ್ಷ್ಮಿಯರಿಗೆ ಗುಡ್ ನ್ಯೂಸ್ ಕೊಟ್ಟ ಲಕ್ಷ್ಮಿ ಹೆಬ್ಬಾಳ್ಕರ್




ಅಕ್ಷರ್ ವಿಜೇತ,ಬೆಂಗಳೂರು |

ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾಗಿರುವ ಗೃಹ ಲಕ್ಷ್ಮಿ ಯೋಜನೆ ಅಡಿಯಲ್ಲಿ ಪ್ರತಿ ಗೃಹಿಣಿಯರಿಗೆ 2000 ರೂಪಾಯಿ ಹಣವನ್ನ ಸರ್ಕಾರ ನೀಡುತ್ತಿದೆ. ಆದರೆ, ರಾಜ್ಯ ಸರ್ಕಾರ ಇದೀಗ ಬರೋಬ್ಬರಿ ಎಂಟು ತಿಂಗಳಿನಿಂದ ಹಣ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳ ಹಣ ಬಂದಿಲ್ಲ ಎಂದು ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಮಹಿಳೆಯರು ಅಸಮಾಧಾನ ಹೊರ ಹಾಕಿದ್ದಾರೆ.ಕಳೆದ ಎಂಟು ತಿಂಗಳಿನಿಂದ ಗೃಹ ಲಕ್ಷ್ಮಿ ಹಣ ತಿಂಗಳಿಗೆ ಸರಿಯಾಗಿ ಜಮಾ ಆಗುತ್ತಿಲ್ಲ ಎನ್ನುವ ಆರೋಪ ಕೇಳಿ ಬರ್ತಾನೆ ಇದೆ. ಮಹಿಳೆಯರಷ್ಟೇ ಅಲ್ಲದೇ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಕೂಡ ಸರ್ಕಾರದ ಬೊಕ್ಕಸ ಖಾಲಿಯಾಗಿದ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರುತ್ತಿದ್ದಾರೆ. ಇದರ ನಡುವೆ ಮಹಿಳಾ ಹಾಗೂ ಮಕ್ಕಳ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಗೃಹ ಲಕ್ಷ್ಮಿ ಯೋಜನೆಯ ಹಣ ಶೀಘ್ರವೇ ಮಹಿಳೆಯ ಅಕೌಂಟ್ ಸೇರಲಿದೆ ಎಂದಿದ್ದಾರೆ. ತಕ್ಷಣವೇ ಹಣ ಬಿಡುಗಡೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವೆ ಹೇಳಿದ್ದಾರೆ.ಕಳೆದ ಎಂಟು ತಿಂಗಳಿನಿಂದ ಗೃಹ ಲಕ್ಷ್ಮಿ ಹಣ ತಿಂಗಳಿಗೆ ಸರಿಯಾಗಿ ಜಮಾ ಆಗುತ್ತಿಲ್ಲ ಎನ್ನುವ ಆರೋಪ ಕೇಳಿ ಬರ್ತಾನೆ ಇದೆ. ಮಹಿಳೆಯರಷ್ಟೇ ಅಲ್ಲದೇ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಕೂಡ ಸರ್ಕಾರದ ಬೊಕ್ಕಸ ಖಾಲಿಯಾಗಿದ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರುತ್ತಿದ್ದಾರೆ. ಇದರ ನಡುವೆ ಮಹಿಳಾ ಹಾಗೂ ಮಕ್ಕಳ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಗೃಹ ಲಕ್ಷ್ಮಿ ಯೋಜನೆಯ ಹಣ ಶೀಘ್ರವೇ ಮಹಿಳೆಯ ಅಕೌಂಟ್ ಸೇರಲಿದೆ ಎಂದಿದ್ದಾರೆ. ತಕ್ಷಣವೇ ಹಣ ಬಿಡುಗಡೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವೆ ಹೇಳಿದ್ದಾರೆ.ಇನ್ನೂ ದೇಶದಲ್ಲೇ ಪ್ರಪ್ರಥಮ ಬಾರಿಗೆ ಕರ್ನಾಟಕ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿಯರ ಮರು ಸಮೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ವಿಧಾನಸೌಧದಲ್ಲಿ ಗುರುವಾರ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿದರು.

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಸಮೀಕ್ಷೆ ನಡೆಯುತ್ತಿದ್ದು, ಮೊದಲ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿಯರ ಮರು ಸಮೀಕ್ಷೆ ನಡೆಯಲಿದೆ. ಸಮೀಕ್ಷೆಯಲ್ಲಿ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ ಕಲ್ಪಿಸಲು ಸಮೀಕ್ಷೆಗಳನ್ನು ನಡೆಸಲಾಗುವುದು ಮಹಿಳಾ ಮತ್ತು ಮಕ್ಕಳ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಹೇಳಿದರು.ಸಮೀಕ್ಷೆಯ ಪೋಸ್ಟರ್ ಬಿಡುಗಡೆ ವೇಳೆ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪದ್ಮಾವತಿ, ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಮಹೇಶ್ ಬಾಬು, ಹಿರಿಯ ಅಧಿಕಾರಿಗಳು, ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಿಲ್ಲಾ, ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ EVM ಬದಲು ಬ್ಯಾಲೆಟ್ ಪೇಪರ್ ಸರ್ಕಾರದ ನಿರ್ಧಾರ; ಚುನಾವಣೆ ಯಾವಾಗ?



ಈ ಪ್ರಕ್ರಿಯೆಯಲ್ಲಿ ಅಗತ್ಯ ಕಾನೂನು ತಿದ್ದುಪಡಿ ಮಾಡಬೇಕು. ನಿಯಮಾವಳಿಗಳಿಗೂ ಕೆಲವು ತಿದ್ದುಪಡಿ ಮಾಡಬೇಕಾಗುತ್ತದೆ. ಅಗತ್ಯ ಕಾನೂನು ಮಾಡಲು ಕ್ಯಾಬಿನೆಟ್ ಶಿಫಾರಸು ಮಾಡಿದೆ.ಮೊದಲ ಹಂತದಲ್ಲಿ ಮತಯಂತ್ರದ ಬದಲು ಮತಪತ್ರ ತರುವಂತೆ ಚುನಾವಣಾ ಆಯೋಗಕ್ಕೆ ಸರ್ಕಾರದ ಶಿಫಾರಸು ಮಾಡಿದೆ ಎಂದು ಸಚಿವ ಹೆಚ್. ಕೆ. ಪಾಟೀಲ್ ಅವರು ಹೇಳಿದರು.

ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಪಾಲಿಕೆ ಪಂಚಾಯಿತಿ ಚುನಾವಣೆಗೆ ಸಿದ್ಧತೆ ನಡೆಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಕುರಿತು ಮಹತ್ವ ನಿರ್ಧಾರವನ್ನ ಪ್ರಕಟಿಸಿದೆ. ಕರ್ನಾಟಕದಲ್ಲಿ ಮುಂದಿನ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರ (ಇವಿಎಂ)ಗಳ ಬದಲಿಗೆ ಬ್ಯಾಲೆಟ್ ಪೇಪರ್ ಬಳಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದಲ್ಲಿ ಬ್ಯಾಲೆಟ್ ಪೇಪರ್ ಬಳಕೆಯ ಬಗ್ಗೆ ಮಹತ್ವದ ನಿರ್ಧಾರವನ್ನು ತೆಗೆದುಕೊಳ್ಳಲಾಗಿದ್ದು, ಕ್ಯಾಬಿನೆಟ್ ಅನುಮೋದನೆ ಸಿಕ್ಕಿದೆ. ಈ ಮೂಲಕ ಶೀಘ್ರದಲ್ಲೇ ನಡೆಯುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಪಾಲಿಕೆ ಚುನಾವಣೆ ಸೇರಿ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಬ್ಯಾಲೆಟ್ ಪೇಪರ್‌ನಲ್ಲಿ ನಡೆಯಲಿವೆ ಎಂದ ಮಾಹಿತಿ ಲಭ್ಯವಾಗಿದೆ.ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ನಾಯಕ ರಾಹುಲ್ ಗಾಂಧಿ ಇತ್ತೀಚಿಗೆ ಮತಗಳ್ಳತನ ಆರೋಪ ಮಾಡಿದ್ದರು, ಇದು ದೇಶಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿತ್ತು. ಅಲ್ಲದೇ ಇದೇ ವಿಚಾರ ಇಟ್ಟುಕೊಂಡು ಕಾಂಗ್ರೆಸ್ ದೇಶಾದ್ಯಂತ ಪ್ರತಿಭಟನೆ ನಡೆಸಿತ್ತು. ಇನ್ನೂ ಕರ್ನಾಟಕದಲ್ಲೂ ರಾಹುಲ್ ಗಾಂಧಿ ನೇತೃತ್ವದಲ್ಲಿ ಬೃಹತ್ ಸಮಾವೇಶವನ್ನ ಮಾಡಿದ್ದರು. ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರ, ಸ್ಥಳೀಯ ಸಂಸ್ಥೆ ಚುನಾವಣೆಗೆ ಬ್ಯಾಲೆಟ್ ಪೇಪರ್ಗೆ ಆದ್ಯತೆ ನೀಡುವಂತೆ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ಮುಂದಾಗಿದೆ.ರಾಜ್ಯ ಸಚಿವ ಸಂಪುಟದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಅವರು, ಇವಿಎಂ ವಿಶ್ವಾಸಾರ್ಹತೆ ಕಡಿಮೆಯಾಗುತ್ತಿರುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಇನ್ನೂ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರ ಬಳಕೆ ಬೇಡ, ಅದನ್ನು ಹ್ಯಾಕ್ ಮಾಡಿ ಬಿಜೆಪಿ ಗೆಲ್ಲುತ್ತಿದೆ ಎಂದು ಕಾಂಗ್ರೆಸ್ ವಾದಿಸುತ್ತಿತ್ತು. ಇದೀಗ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನಿರ್ಧಾರ ಕೈಗೊಂಡಿದ್ದು, ಮುಂದೆ ನಡೆಯುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆ ಮಾಡುವಂತೆ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಿದೆ.

ಮುಂಬರುವ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ, ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಲು ಶಿಫಾರಸು ಮಾಡಲು ಕ್ಯಾಬಿನೆಟ್ ಅನುಮೋದನೆ ನೀಡಿದೆ.